ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 06–11–2020

# ಮಾಧ್ಯಮ ಆಹ್ವಾನ

1) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭ-2020ನ್ನು ಆಯೋಜಿಸಲಾಗಿದೆ. ಸನ್ಮಾನ್ಯ ಮುಖ್ಯ ಮಂತ್ರಿ ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ
ಶ್ರೀ ಗೋವಿಂದ ಎಂ. ಕಾರಜೋಳ, ಸನ್ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಇಲಾಖೆ ಸಚಿವರು.

ಡಾ. ಸಿ. ಎನ್. ಅಶ್ವತ್ಥನಾರಾಯಣ, ಮಾನ್ಯ ಉಪ ಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ, ವಿದ್ಯುನ್ಮಾನ ಐ.ಟಿ. ಬಿ.ಟಿ. ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಇಲಾಖೆ ಸಚಿವರು.

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ, ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

ಶ್ರೀ ಸಿ.ಟಿ. ರವಿ, ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ

ಹಾಗೂ ಕ್ರೀಡಾ ಸಚಿವರು.

ಶ್ರೀ ತೇಜಸ್ವಿ ಸೂರ್ಯ, ಮಾನ್ಯ ಸಂಸದರು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ಇವರು ಭಾಗವಹಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಶ್ರೀ ಉದಯ್ ಬಿ. ಗರುಡಾಚಾರ್, ಮಾನ್ಯ ಶಾಸಕರು, ಚಿಕ್ಕಪೇಟೆ, ವಿಧಾನಸಭಾ ಕ್ಷೇತ್ರ ಇವರು ವಹಿಸಲಿದ್ದಾರೆ.

ಎಲ್ಲಾ ಪತ್ರಿಕಾ ಪ್ರತಿನಿಧಿಗಳು ಹಾಗೂ ವಿದ್ಯುನ್ಮಾನ ಮಾಧ್ಯಮ ಪ್ರತಿನಿಧಿಗಳು ಹಾಗೂ ಪತ್ರಿಕಾ ಛಾಯಾ ಗ್ರಾಹಕರು ಭಾಗವಹಿಸುವಂತೆ ಕೋರಲಾಗಿದೆ.

ದಿನಾಂಕ:07.11.2020ರಂದು ಶನಿವಾರ, ಬೆಳಿಗ್ಗೆ 11.30ಗಂಟೆಗೆ

ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು

ವಿ.ಸೂಚನೆ:

**1.** ಮಾಧ್ಯಮ ಪ್ರತಿನಿಧಿಗಳಿಗೆ ರವೀಂದ್ರ ಕಲಾಕ್ಷೇತ್ರದ ಬಲಭಾಗದ ಪ್ರವೇಶ ದ್ವಾರದಿಂದ ಪ್ರವೇಶ ಕಲ್ಪಿಸಲಾಗಿದೆ.

**2.**ಮಾಧ್ಯಮ ಪ್ರತಿನಿಧಿಗಳು ಕೋವಿಡ್ ಮಾರ್ಗ ಸೂಚಿಯ ನಿಯಮಗಳನ್ನು ಪಾಲಿಸಲು ಸಹಕರಿಸುವಂತೆ ಕೋರಲಾಗಿದೆ.

**2 ) ನಗರ ಭೂಸಾರಿಗೆ ನಿರ್ದೇಶನಾಲಯ, ಯುಕೆ ಕ್ಯಾಟ್‌ಪಲ್ಟ್ ಹಾಗೂ ಭಾರತೀಯ ವಿಜ್ಞಾನ ಸಂಸ್ಥೆ ಸಹಯೋಗದಲ್ಲಿ ಸ್ವಚ್ಛ ವಾಯು ಬೀದಿ ಚಟುವಟಿಕೆ ಪ್ರದರ್ಶನ (ನಾಗರೀಕ ಕೇಂದ್ರಿತ ವಾತಾವರಣ ಸೃಷ್ಟಿ ಹಾಗೂ ವಿದ್ಯತ್ ವಾಹನಗಳ ಆವಿಷ್ಕಾರ)**

**ಉದ್ಘಾಟನೆ:**

**ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**

ಬಿ.ಎ. ಬಸವರಾಜ, ನಗರಾಭಿವೃದ್ಧಿ ಸಚಿವರು, ಕರ್ನಾಟಕ ಸರ್ಕಾರ

ದಿನಾಂಕ: ನವೆಂಬರ್ 7 ಶನಿವಾರ ಸಮಯ : 11–00 ಗಂಟೆಗೆ

ಸ್ಥಳ: ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್ ಪ್ರವೇಶದ್ವಾರ, ಬೆಂಗಳೂರು

Directorate of Urban Land Transport, Catapult and IISc

**Launch of India's –first ever Clean Air Street on Church Street**

**by**

**B.S. Yediyurappa**

**Chief Minister of Karnataka**

**Guest of Honour :**

**B.A. Basavaraja (Byarati)**
**Minister of Urban Development, Government of Karnataka**

**Date: 7th November 2020 Saturday, Time: 11-00 A.M.**

**Place: Entrance of Church Street from Brigade Road, Bengaluru**

3. ನೂತನ ರಾಷ್ಟ್ರೀಯ ಶಿಕ್ಷಣ ನೀತಿ–ಎನ್ಇಪಿ ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ತಜ್ಞರ ಸಮಿತಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಕಾರ್ಯಕ್ರಮ :

ಡಾ : ಸಿ.ಎನ್. ಅಶ್ವಥ್‌ನಾರಾಯಣ್,
ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಎಸ್. ಸುರೇಶ್‌ಕುಮಾರ್
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ದಿನಾಂಕ : **07-11-2020** ಶನಿವಾರ ಅಪರಾಹ್ನ **3-00** ಗಂಟೆಗೆ

ಸ್ಥಳ : ಸಮ್ಮೇಳನ ಸಭಾಂಗಣ, ವಿಧಾನಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಬೆಂಗಳೂರು ಅಂತರಾಷ್ಟ್ರೀಯ ತಾಂತ್ರಿಕ ಶೃಂಗಸಭೆ

**ಬೆಂಗಳೂರು, ನವಂಬರ್ 06 (ಕರ್ನಾಟಕ ವಾರ್ತೆ):**

ಬೆಂಗಳೂರು ಅಂತರರಾಷ್ಟ್ರೀಯ ತಾಂತ್ರಿಕ ಶೃಂಗಸಭೆಯ 23ನೇ ಆವೃತ್ತಿಯನ್ನು ನವೆಂಬರ್ 19 ರಿಂದ 21 ವರ್ಚುವಲ್ ಮೂಲಕ ಹಮ್ಮಿಕೊಳ್ಳಲಾಗಿದೆ.

ದೇಶ-ವಿದೇಶಗಳ ಉನ್ನತ ತಂತ್ರಜ್ಞಾನ ತಜ್ಞರು, ಭವಿಷ್ಯ ತಜ್ಞರು, ನೀತಿ ನಿರೂಪಕರು, ಸಂಶೋಧನಾ ಮುಖ್ಯಸ್ಥರು ಮತ್ತು ಉದ್ಯಮಿಗಳು ಈ ಶೃಂಗಸಭೆಯಲ್ಲಿ ಪಾಲ್ಗೊಳ್ಳುತ್ತಿದ್ದು, ಈ ವರ್ಷ ವಿಶೇಷವಾಗಿ **NEXT IS NOW** ವಿಷಯಾಧರಿತ ಚರ್ಚೆಗಳನ್ನು ಹಮ್ಮಿಕೊಳ್ಳಲಾಗಿದೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ ಈಗಾಗಲೇ ಗುರುತಿಸಿಕೊಂಡಿರುವ ಬೆಂಗಳೂರು ತಾಂತ್ರಿಕ ಶೃಂಗಸಭೆಯಲ್ಲಿ ವಿಶ್ವದ ಅತ್ಯುತ್ತಮ ತಂತ್ರಜ್ಞರು, ಉದ್ಯಮಿಗಳು ತಮ್ಮ ಹೊಸ ಉತ್ಪನ್ನಗಳನ ಬಗ್ಗೆ ಹಾಗೂ ಭವಿಷ್ಯದ ಅತ್ಯಾಧುನಿಕ ವಿಚಾರಗಳನ್ನು ಪ್ರಸ್ತುತಪಡಿಸುತ್ತಾರೆ.

2020ರ ಈ ಸಮ್ಮೇಳದಲ್ಲಿ 5000 ಕ್ಕೂ ಹೆಚ್ಚು ಉದ್ಯಮಿಗಳು ಭಾಗವಹಿಸುತ್ತಾರೆ. 250ಕ್ಕೂ ಹೆಚ್ಚು ತಂತ್ರಜ್ಞರು ಹಾಗೂ ವಿಜ್ಞಾನಿಗಳು ತಮ್ಮ ವಿಷಯಗಳ ಕುರಿತು ಮಾತನಾಡಲಿದ್ದಾರೆ. ಆನ್ ಲೈನ್ ಮೂಲಕ ವರ್ಚುವಲ್ ಪ್ರದರ್ಶನ ಮತ್ತು ಬಿ2ಬಿ ಸಭೆಗಳು ಇರುತ್ತವೆ.

ಜಾಗತಿಕ ಅವಿಷ್ಕಾರಗಳ ಒಕ್ಕೂಟದ ಸದಸ್ಯ ರಾಷ್ಟ್ರಗಳಾದ ಯುಎಸ್‌ಎ, ಯುಕೆ, ಕೆನಡಾ, ಫ್ರಾನ್ಸ್, ಜರ್ಮನಿ, ನೆದರ್‌ಲ್ಯಾಂಡ್, ಸಿಂಗಪುರ, ಫಿನ್ ಲ್ಯಾಂಡ್, ಆಸ್ಟ್ರೇಲಿಯಾ, ಸ್ವಿಟ್ಜರ್‌ಲ್ಯಾಂಡ್, ಜಪಾನ್ ಮತ್ತು ಇಸ್ರೇಲ್‌ನಂತಹ 25 ಕ್ಕೂ ಹೆಚ್ಚು ಪ್ರಮುಖ ದೇಶಗಳು ಈ ಶೃಂಗಸಭೆಯಲ್ಲಿ ಭಾಗವಹಿಸಲಿವೆ.

ಇದೆ ಸಂದರ್ಭದಲ್ಲಿ ಭಾರತದಲ್ಲಿರುವ ರಾಜ್ಯಗಳ ನಡುವೆ ತಾಂತ್ರಿಕ ವಿಜ್ಞಾನದ ಸಮನ್ವಯ ಹಾಗೂ ವಿನಿಮಯ ಉದ್ದೇಶದಿಂದ 'ಇಂಡಿಯಾ ಇನ್ನೋವೇಷನ್ ಅಲಯನ್ಸ್' ಯನ್ನು ಸ್ಥಾಪಿಸಲಾಗಿದ್ದು, ಭಾರತೀಯ ನಾವೀನ್ಯತೆ ಮೈತ್ರಿ, ಜಂಟಿ ಅಭಿವೃದ್ಧಿ, ತಂತ್ರಜ್ಞಾನ ವರ್ಗಾವಣೆ, ಕೈಗಾರಿಕೆ ಚಟುವಟಿಕೆಗಳ ಕುರಿತು ರಾಜ್ಯಗಳ ನಡುವೆ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ಮತ್ತು ರಾಜ್ಯಗಳ ನಡುವೆ ಸಂಪರ್ಕ ಕಲ್ಪಿಸುವ ವಾಣಿಜ್ಯೀಕರಣದ ಗುರಿಯನ್ನು ಹೊಂದಿದೆ.

ಕಾರ್ಯಕ್ರಮದ ಹೆಚ್ಚಿನ ವಿವರಗಳಿಗಾಗಿ ವೆಬ್ ಸೈಟ್ https://www.bengalurutechsummit.com ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂಗಳೂರು, ನವೆಂಬರ್ 06 (ಕರ್ನಾಟಕ ವಾರ್ತೆ) :**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ವತಿಯಿಂದ 2020 ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80 ಕ್ಕಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ (ಕನಿಷ್ಠ ೦೩ ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ Central Sector Scheme of Scholarship for College and University Studentsಗಳಿಗೆ online ಮೂಲಕ ಅರ್ಜಿ ಸಲ್ಲಿಸಲು website:**www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಈ portalನಲ್ಲಿ **2020ರ Fresh Batch**ನ **ವಿದ್ಯಾರ್ಥಿಗಳು ಮಾತ್ರ ಅರ್ಜಿಗಳನ್ನು "online" ಮೂಲಕ ಸಲ್ಲಿಸುವಂತೆ ಸೂಚಿಸಲಾಗಿತ್ತು.**

ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ **ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ: 30-11-2020ರವರೆಗೆ** ವಿಸ್ತರಿಸಲಾಗಿದೆ.

ಅಂತೆಯೇ, ಪ್ರಾಚಾರ್ಯರುಗಳು, **"online" ಮೂಲಕ** ವಿದ್ಯಾರ್ಥಿಗಳು ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ** ಇಲಾಖೆಗೆ ದಿನಾಂಕ:**15-12-2020**ರ ಒಳಗೆ ಸಲ್ಲಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಶ್ರೀ ಕ್ಷೇತ್ರ ಶಬರಿಮಲೈಗೆ ತೆರಳುವ ಭಕ್ತಾಧಿಗಳಿಗೆ ಕೇರಳ ಸರ್ಕಾರದ ಮಾರ್ಗಸೂಚಿ

**ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯದಿಂದ ಕೇರಳ ರಾಜ್ಯದ ಶ್ರೀಕ್ಷೇತ್ರ ಶಬರಿಮಲೈಗೆ ತೆರಳುವ ಭಕ್ತಾಧಿಗಳು/ಯಾತ್ರಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಕೇರಳ ಸರ್ಕಾರದಿಂದ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ಹೊರಡಿಸಲಾಗಿದೆ ಎಂದು ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.**

**ಯಾತ್ರಾರ್ಥಿಗಳು https://sabarimalaonline.org/ ವೆಬ್‌ಸೈಟ್‌ನ ಪೋರ್ಟಲ್‌ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡಿರುವವರಿಗೆ ಅನುಮತಿಸಿದ ನಂತರದಲ್ಲಿ ಮಾತ್ರ ಶಬರಿಮಲೈ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು. ಪ್ರಥಮವಾಗಿ ಪ್ರತಿ ದಿನ ಒಂದು ಸಾವಿರ ಯಾತ್ರಾರ್ಥಿಗಳಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿಕೊಂಡವರಿಗೆ ಮೊದಲ ಆದ್ಯತೆ ನೀಡಲಾಗುವುದು.**

**ಭೇಟಿ ನೀಡುವ 48 ಗಂಟೆ ಅವಧಿಯ ಮೊದಲು ಕೋವಿಡ್-19 ಪ್ರಮಾಣ ಪತ್ರ ಹೊಂದಿರುವುದು ಕಡ್ಡಾಯ. ಪ್ರವೇಶ ಸ್ಥಳದಲ್ಲಿ ಆಟಿಟಿಜೆನ್ ಟೆಸ್ಟ್‌ಗೆ ಅವಕಾಶ ಕಲ್ಪಿಸಲಾಗಿದ್ದು, ಅದರ ವೆಚ್ಚವನ್ನು ಯಾತ್ರಾರ್ಥಿಗಳೇ ಭರಿಸಬೇಕು.**

**ಹತ್ತು ವರ್ಷದೊಳಗಿನ ಹಾಗೂ 60 ರಿಂದ 65 ವರ್ಷ ಮೇಲ್ಪಟ್ಟವರಿಗೆ ಹಾಗೂ ಅನಾರೋಗ್ಯದ ಲಕ್ಷಣ ಇರುವವರಿಗೆ ಯಾತ್ರಾ ಪ್ರದೇಶಕ್ಕೆ ಅನುಮತಿ ಇರುವುದಿಲ್ಲ. ಬಿಪಿಎಲ್, ಆಯುಷ್ಮಾನ್ ಇತರೆ ಕಾರ್ಡ್ ಹೊಂದಿರುವವರು ಯಾತ್ರೆಗೆ ತೆರಳುವ ಸಮಯದಲ್ಲಿ ಅದನ್ನ ಹೊಂದಿರಬೇಕು.**

**ತುಪ್ಪದ ಅಭಿಷೇಕ, ಪಂಪಾನದಿ ಸ್ನಾನ, ಸನ್ನಿಧಾನದಲ್ಲಿ ರಾತ್ರಿ ತಂಗುವುದು ಹಾಗೂ ಪಂಪಾ ಮತ್ತು ಗಣಪತಿ ದೇವಸ್ಥಾನಗಳಿಗೆ ಅವಕಾಶವಿರುವುದಿಲ್ಲ. ಯಾತ್ರಾರ್ಥಿಗಳು ಪ್ರಯಾಣಕ್ಕೆ ಎರುಮೆಲು ಮತ್ತು ವೇದಸಾರಿಕ್ಕರ ಮಾರ್ಗದಲ್ಲಿ ಮಾತ್ರ ಅವಕಾಶ ಇರುತ್ತದೆ.**

# ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಬಾಧಿತರಾದ ನೌಕರರು- ಕಾರ್ಮಿಕರಿಗೆ ಕ್ವಾರಂಟೈನ್ ರಜೆ ಮಂಜೂರು

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ): ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಬಾಧಿತರಾದ ನೌಕರರು/ಕಾರ್ಮಿಕರಿಗೆ ಕ್ವಾರಂಟೈನ್ ರಜೆ ಮಂಜೂರು ಮಾಡುವ ಕುರಿತು ಸರ್ಕಾರ ಆದೇಶ ನೀಡಿದೆ.

ಆದೇಶದನ್ವಯ ಕೊರೋನಾ ರೋಗದಿಂದ ಬಾಧಿತರಾದ ನೌಕರರು-ಕಾರ್ಮಿಕರು ಕ್ವಾರಂಟೈನ್‌ನಲ್ಲಿ ಇರುವ ಅವಧಿಯನ್ನು ಅನಧಿಕೃತ ಗೈರು ಹಾಜರಿ ಎಂದು ಪರಿಗಣಿಸದಿರುವ್ಯದು ಎಚಿದು ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಜೀವವೈವಿಧ್ಯ ಮಂಡಳಿ ಸಭೆಯ ನಿರ್ಣಯಗಳು

ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ): ರಾಜ್ಯದ 9 ಸ್ಥಳಗಳಲ್ಲಿ ಮತ್ಸ್ಯಧಾಮ ಸಂರಕ್ಷಣಾ ವಲಯಕ್ಕೆ ಶಿಫಾರಸು.ಗುಡಿಬಂಡೆತಾಲ್ಲೂಕು ಆದಿನಾರಾಯಣ ಸ್ವಾಮಿ ಬೆಟ್ಟವನ್ನು ರಾಜ್ಯ ಜೈವಿಕ ಪಾರಂಪರಿಕ ತಾಣ ಎಂದು ಘೋಷಿಸಲು ನಿರ್ಧಾರ. ಕುಮಾರಧಾರ ನದಿ ತೀರ ಉರುಂಬಿಗೆ ಸೂಕ್ಷ್ಮ ಜೈವಿಕ ಪ್ರದೇಶ ಪಟ್ಟ.

**ಸೋಂದಾ ಮುಂಡಿಗೆಕೆರೆಯನ್ನು ಪಕ್ಷಿ ಧಾಮ ಎಂದು ಘೋಷಿಸಲು ವನ್ಯಜೀವಿ ಇಲಾಖೆಗೆ ಶಿಫಾರಸು. ಹಾಸನದ ರಾಜಮುಡಿ ಭತ್ತ, ಕುಮಟಾ ಕಗ್ಗ ಭತ್ತ, ಅಂಕೋಲಾದ ಕರೇಈಶಾಡು ಬೆಳೆಗಳಿಗೆ ಜಿಯೋಗ್ರಫಿಕಲ್ ಇಂಡಿಕೇಟರ್ ಮಾನ್ಯತೆ ನೀಡಲು ಕೇಂದ್ರಕ್ಕೆ ಶಿಫಾರಸು.**

ಕರ್ನಾಟಕ ಜೀವವೈವಿಧ್ಯ ಮಂಡಳಿ ಸಭೆ ಇತ್ತೀಚೆಗೆ ಬೆಂಗಳೂರಿನಲ್ಲಿ (ದಿನಾಂಕ 22-10-2020) ನಡೆಯಿತು. ಜೀವವೈವಿಧ್ಯ ಮಂಡಳಿ ಅಧ್ಯಕ್ಷ ಅನಂತ ಹೆಗಡೆ ಅಶೀಸರ ಅಧ್ಯಕ್ಷತೆ ವಹಿಸಿದ್ದರು.

## ಹಲವು ಮಹತ್ವದ ನಿರ್ಣಯಗಳನ್ನು ಜೀವವೈವಿಧ್ಯ ಮಂಡಳಿ ಕೈಗೊಂಡಿದೆ:

1) ಚಿಕ್ಕಬಳ್ಳಾಪುರ ಜಿಲ್ಲೆಗುಡಿಬಂಡೆತಾಲ್ಲೂಕು ಆದಿನಾರಾಯಣ ಸ್ವಾಮಿ ಬೆಟ್ಟವನ್ನು ಬಹು ಅಮೂಲ್ಯ ದೇವರಕಾಡು ಎಂದು ಗುರುತಿಸಿ ರಾಜ್ಯ ಜೈವಿಕ ಪಾರಂಪರಿಕತಾಣ ಎಂಬ ಪಟ್ಟವನ್ನು ನೀಡಲು ನಿರ್ಧರಿಸಲಾಗಿದೆ.
2) ದಕ್ಷಿಣ ಜಿಲ್ಲೆ ಕಡಬ ತಾಲ್ಲೂಕಿನ ಕುಮಾರಧಾರಾ ನದೀ ತೀರದ ಉರುಂಬಿ ಎಂಬ ಸ್ಥಳವನ್ನು ಸೂಕ್ಷ್ಮ ಜೈವಿಕ ಪ್ರದೇಶ ಎಂದು ಜೀವವೈವಿಧ್ಯ ಮಂಡಳಿ ಗುರುತಿಸಿದೆ. ಈ ಪ್ರದೇಶವನ್ನು ಜೈವಿಕತಾಣ ಎಂದು ಘೊಷಿಸಲು ಅಗತ್ಯ ಕ್ರಮ ಕೈಗೊಳ್ಳಲು ನಿರ್ಧಾರಕ್ಕೈಗೊಂಡಿದೆ.
3) ನೆಲಮಂಗಲ ತಾ॥. ಮಹಿಮಾರಂಗ ಬೆಟ್ಟ, ಹಾಗೂ ಕೋಲಾರದ ಅಂತರಗಂಗೆ ಬೆಟ್ಟ ಈ ಸ್ಥಳಗಳನ್ನು ಜೀವ ವೈವಿಧ್ಯತಾಣಎಂದು ಮಂಡಳಿ ಗುರುತಿಸಿದೆ. ಘೋಷಣೆಗೆ ಅಗತ್ಯ ಕ್ರಮ ಕೈಗೊಳ್ಳಲಿದೆ.

4) ಚಿಕ್ಕಮಗಳೂರು ಜಿಲ್ಲೆ ಸಖರಾಯ ಪಟ್ಟಣದ ಶಕುನಗಿರಿ ಬೆಟ್ಟ ಅಪರೂಪದತಾಣವಾಗಿದೆ. ಪಕ್ಕದಲ್ಲೇ ಇರುವ ಹೊಗರೇಕಾನುಗಿರಿ ಪಾರಂಪರಿಕ ತಾಣಕ್ಕೆ ಈ ಬೆಟ್ಟ ಪ್ರದೇಶವನ್ನು ಸೇರ್ಪಡೆ ಮಾಡಲು ಶಿಫಾರಸು ಮಾಡಲಾಗಿದೆ.
5) ಉ.ಕ. ಜಿಲ್ಲೆ ಶಿರಸಿ ತಾಲ್ಲೂಕು ಸೋಂದಾ ಗ್ರಾಮದ ಮುಂಡಿಗೆಕೆರೆ ಬೆಳ್ಳಕ್ಕಿಗಳ ತವರೂರಾಗಿದೆ. ಸ್ಥಳೀಯ ಗ್ರಾಮ ಪಂಚಾಯತ್ ಈಗಾಗಲೇ ಜೈವಿಕ ತಾಣ ಎಂದು ಗುರುತಿಸಿದೆ. ಸ್ಥಳೀಯ ಜನತೆ ಪಕ್ಷಿಧಾಮ ಎಂದು ಘೋಷಿಸಲು ಪ್ರಸ್ತಾವನೆ ಸಲ್ಲಿಸಿದೆ.ಈ ಪ್ರಸ್ತಾವನೆಯನ್ನು ಜೀವವೈವಿಧ್ಯ ಮಂಡಳಿ ಪುರಸ್ಕರಿಸಿದೆ. ವನ್ಯಜೀವಿ ಇಲಾಖೆಗೆ ಮುಂಡಿಗೆಕೆರೆ ಪಕ್ಷಿಧಾಮ ಘೋಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಶಿಫಾರಸು ಮಾಡಲಾಗಿದೆ.

6) ರಾಜ್ಯದ 8 ಸ್ಥಳಗಳಲ್ಲಿ ಜೀವವೈವಿಧ್ಯ ಮಂಡಳಿ ಮತ್ಸ್ಯಧಾಮಗಳನ್ನು ಗುರುತಿಸಿ ಘೊಷಿಸಿದೆ. ಮೀನುಗಾರಿಕಾ ಇಲಾಖೆ ಮೂಲಕ ಈ ಕ್ರಮ ಕೈಗೊಳ್ಳಲಾಗಿದೆ. ರಾಜ್ಯದ ಇನ್ನೂ 7 ಸ್ಥಳಗಳಲ್ಲಿ ಅಪರೂಪದ ಮೀನು ವೈವಿಧ್ಯ ತಾಣಗಳನ್ನು ಗುರುತಿಸಿ ಘೊಷಣೆ ಮಾಡಲು ಮಂಡಳಿ ನಿರ್ಧರಿಸಿದೆ. ಮೀನುಗಾರಿಕಾ ಇಲಾಖೆ ಜೊತೆ ಮುಂದಿನ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ.
7) ರಾಜ್ಯದ ಕುಮಟಾ ತಾಲ್ಲೂಕಿನ ಗಜನಿ ಕಗ್ಗಭತ್ತ, ಹಾಸನದ ರಾಜಮುಡಿ ಅಕ್ಕಿ ಹಾಗೂ ಅಂಕೋಲಾ ತಾಲ್ಲೂಕಿನ ಕರೇ ಈಶಾಡು ಮಾವಿನ ಹಣ್ಣು ಈ ಮೂರು ವಿನಾಶದ ಅಂಚಿನ ಕೃಷಿ ಮತ್ತು ತೋಟಗಾರಿಕಾ ಜೀವವೈವಿಧ್ಯ ತಳಿಗಳ ಉಳಿವಿಗೆ ರಾಜ್ಯ ಜೀವವೈವಿಧ್ಯ ಮಂಡಳಿ ವಿಶೇಷ ಗಮನ ನೀಡಿದೆ. ಈ ತಳಿಗಳಿಗೆ ಕೇಂದ್ರ ಸರ್ಕಾರ ಜಿಯಾಗ್ರಫಿಕಲ್ ಇಂಡಿಕೇಟರ್ ಸ್ಥಾನಮಾನ ನೀಡಬೇಕು ಎಂದು ಮಂಡಳಿ ಶಿಫಾರಸು ಮಾಡಿದೆ.
8) ಜೀವವೈವಿಧ್ಯ ಮಂಡಳಿ ಈ ಹಿಂದೇರಾಜ್ಯದಲ್ಲಿ 10 ಪಾರಂಪರಿಕ ವೃಕ್ಷಗಳನ್ನು ಗುರುತಿಸಿದೆ. ಇನ್ನಷ್ಟು ಪಾರಂಪರಿಕ ವೃಕ್ಷಗಳನ್ನು ಗುರುತಿಸಲು ಮುಂದಾಗಲಿದೆ. ರಾಜ್ಯಮಟ್ಟದ ಮಹಾನ್ ಪಾರಂಪರಿಕ ವೃಕ್ಷಗಳನ್ನು ಜೀವವೈವಿಧ್ಯ ಕಾಯಿದೆ ಅಡಿಯಲ್ಲಿ ಘೋಷಣೆ ಮಾಡಲು ಮಾರ್ಗದರ್ಶಿ ಸೂತ್ರ ಸಿದ್ಧಪಡಿಸಿ ಸರ್ಕಾರದ ಒಪ್ಪಿಗೆ ಪಡೆಯಬೇಕು. ಈ ಪ್ರಕ್ರಿಯೆ ನಡೆಸಲು ಮಂಡಳಿ ನಿರ್ಧಾರಕೈಗೊಂಡಿದೆ.
9) ಗ್ರಾಮ ಸಾಮೂಹಿಕ ಭೂಮಿ, ಗ್ರಾಮ ನೈಸರ್ಗಿಕ ಸಂಪತ್ತಿನ ಸಂರಕ್ಷಣೆಗೆ ಜೀವವೈವಿಧ್ಯ ಮಂಡಳಿ ಸಮೀಕ್ಷೆ ನಡೆಸಿ ವರದಿ ಪಡೆಯಲು ತಜ್ಞರ ಸಮಿತಿ ರಚಿಸಲಿದೆ.

**ಫೋಟೋ:** 1) ಕುಮಟಾಗಜನಿ ಭತ್ತ ಭೂಮಿ

2) ಆದಿನಾರಾಯಣ ಸ್ವಾಮಿ ಬೆಟ್ಟ

**ಇಂದ:** ಅಧ್ಯಕ್ಷರ ಆಪ್ತಕಾರ್ಯದರ್ಶಿ

ಕರ್ನಾಟಕ ಜೀವವೈವಿಧ್ಯ ಮಂಡಳಿ.

ದಿನಾಂಕ: 05-11-2020.

# ಜಲಮಂಡಳಿಯ ಕಿಯೋಸ್ಕ್‌ಗಳಲ್ಲಿ ಮುಂದಿನ 2 ತಿಂಗಳು ನೀರಿನ ಶುಲ್ಕವನ್ನು ಚೆಕ್ ಅಥವಾ ಡಿಡಿ ಮೂಲಕ ಸ್ವೀಕಾರ

**ಬೆಂಗಳೂರು, ನವೆಂಬರ್ 6 (ಕರ್ನಾಟಕ ವಾರ್ತೆ)**

ದಿನಾಂಕ: 01.11.2020 ರಿಂದ ಮಂಡಳಿಯ ಕಿಯೋಸ್ಕ್‌ಗಳಲ್ಲಿ ನೀರಿನ ಶುಲ್ಕವನ್ನು ಚೆಕ್ ಅಥವಾ ಡಿಡಿ ಮೂಲಕ ಸ್ವೀಕರಿಸುವುದನ್ನು ರದ್ದುಪಡಿಸಿ, ನಗದು ಹಾಗೂ ಡಿಜಿಟಲ್ ಪೇಮೆಂಟ್ ಮೋಡ್‌ಗಳ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿತ್ತು.

ಮುಂದುವರೆದಂತೆ ಡಿಜಿಟಲ್ ಪೇಮೆಂಟ್ ಮೋಡ್‌ಗಳ ಮೂಲಕ ನೀರಿನ ಶುಲ್ಕವನ್ನು ಪಾವತಿಸುವುದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಪೂರ್ಣ ಪ್ರಮಾಣದಲ್ಲಿ ತೊಡಗಿಸಿಕೊಳ್ಳಲು ಕಾಲಾವಕಾಶ ಬೇಕಾಗಿರುವುದರಿಂದ ಮುಂದಿನ 2 ತಿಂಗಳವರೆಗೆ ಅಂದರೆ ಡಿಸೆಂಬರ್-2020ರ ಅಂತ್ಯದವರೆಗೆ ಈ ಹಿಂದಿನ ಪದ್ಧತಿಯಂತೆ ಕಿಯೋಸ್ಕ್‌ಗಳಲ್ಲಿ ನೀರಿನ ಶುಲ್ಕವನ್ನು ಚೆಕ್ ಅಥವಾ ಡಿಡಿ ಮೂಲಕ ಸ್ವೀಕರಿಸಲಾಗುತ್ತದೆ ಹಾಗೂ ಜನವರಿ-2021 ರಿಂದ ನಗದು ಹಾಗೂ ಡಿಜಿಟಲ್ ಪೇಮೆಂಟ್ ಮೋಡ್‌ಗಳಾದ BBPS, PayTm, BHIM, PayU, Amazon Pay, Phone Pay, Google Pay, RTGS/NEFT, QRCode ಹಾಗೂ ಶುಲ್ಕ ಸಹಿತ Payment gateway-Axis bank, ICICI Bank, IndusInd bank, IDBI Bank and BWSSB mobile application ಗಳಲ್ಲಿ ನೀರಿನ ಶುಲ್ಕವನ್ನು ಸ್ವೀಕರಿಸಲಾಗುವುದು ಹಾಗೂ ಮಂಡಳಿಯ ಜಾಲತಾಣ WWW. bwssb.gov.in ಗೆ ಲಾಗಿನ್ ಆಗಿಯು ಸಹ ನೀರಿನ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.